ಸಂಸಾರ ದಟ್ಟಣೆ ನಿಯಂತ್ರಣಕ್ಕಾಗಿ ಪೊಲೀಸ್ ಇಲಾಖೆಯ ಕ್ರಮಗಳು

1162 (1898); ಶ್ರೀ ಹ್ಯಾರೀಸ್ ಎನ್.ಎ. (ಶಾಂತಿನಗರ)

ಅ) ಬೆಂಗಳೂರು ಮಹಾನಗರದಲ್ಲಿ ಜನಸಂಖ್ಯೆ ಮತ್ತು ವಾಹನಗಳ ಹೆಚ್ಚಳದಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ಪೊಲೀಸ್ ಇಲಾಖೆಯ ಪರಿಣಾಮಕಾರಿ ಕ್ರಮಗಳೇನು;

ಆ) ಈ ನಗರದಲ್ಲಿ ಎಷ್ಟು ಪ್ರಮುಖ ಸ್ಥಳಗಳಲ್ಲಿ ಕ್ಯಾಮರಗಳನ್ನು ಅಳವಡಿಸಲಾಗಿದೆ; ಪೊಲೀಸ್ ವ್ಯವಸ್ಥೆಯ ಹೆಚ್ಚಳ ಮತ್ತು ಸಂಚಾರ ನಿಯಂತ್ರಣ/ನಿಯಮಗಳ ಉಲ್ಲಂಘನೆಗೆ ತೆಗೆದುಕೊಂಡಿರುವ ಕಟ್ಟುನಿಟ್ಟಿನ ಕ್ರಮಗಳಾವುವು ಹಾಗೂ ಖಾಸಗಿ ಬಸ್‌ಗಳಿಗೆ ನಗರ ಪ್ರದೇಶದಲ್ಲಿ ನಿರ್ಬಂಧ ವಿಧಿಸುವ ಬಗ್ಗೆ ಕೈಗೊಂಡಿರುವ ಕ್ರಮಗಳಾವುವು;

ಇ) ನಗರ ಪ್ರದೇಶ ವ್ಯಾಪ್ತಿಯಲ್ಲಿ ಭಾರಿ ವಾಹನಗಳ ಪ್ರವೇಶ ನಿಷೇದಕ್ಕೆ ಅನುಸರಿಸುತ್ತಿರುವ ನೀತಿ ನಿಯಮಗಳೇನು?

ಶ್ರೀ ಕೆ.ಜೆ. ಜಾರ್ಜ್ (ಗೃಹ ಸಚಿವರು)

ಅ) ಬೆಂಗಳೂರು ಮಹಾನಗರದಲ್ಲಿ ಜನಸಂಖ್ಯೆ ಮತ್ತು ವಾಹನಗಳ ಹೆಚ್ಚಳದಿಂದ ಉಂಟಾಗುತ್ತಿರುವ ಸಂಚಾರ ದಟ್ಟಣೆ ನಿಯಂತ್ರಣಕ್ಕಾಗಿ ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗದಿಂದ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

1) ಬೆಂಗಳೂರು ನಗರದಲ್ಲಿ ಇರುವ ರಸ್ತೆಗಳ ಮಿತಿಗಿಂತ ಹೆಚ್ಚು ವಾಹನಗಳು ಸಂಚರಿಸುತ್ತಿದ್ದು ವಾಹನ ದಟ್ಟಣೆಗೆ ಪ್ರಮುಖ ಕಾರಣವಾಗಿದ್ದು, ಇದನ್ನು ಸುಗಮಗೊಳಿಸಲು ಕೆಲವು ಪ್ರಮುಖ ರಸ್ತೆಗಳಲ್ಲಿ ಸಿಗ್ನಲ್ ಫ್ರೀ ಕಾರಿಡಾರ್‌ಗಳನ್ನು ಮಾಡಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ.

2) ಸಂಚಾರ ದಟ್ಟಣೆ/ ಸಮಸ್ಯೆಗಳು ಕಂಡುಬರುತ್ತಿರುವ ಸ್ಥಳಗಳಲ್ಲಿ ಪರಿವೀಕ್ಷಣೆ ನಡೆಸಿ ಸುಗಮ ಸಂಚಾರದ ಹಿತದೃಷ್ಟಿಯಿಂದ ನಗರದ ಹಲವಾರು ಸ್ಥಳಗಳಲ್ಲಿ ಬಲ ತಿರುವು ಹಾಗೂ ಯು–ತಿರುವುಗಳನ್ನು ನಿರ್ಬಂಧಿಸಲಾಗಿದೆ.

3) ಬೆಂಗಳೂರು ನಗರದ ಕೇಂದ್ರ ಭಾಗದಲ್ಲಿನ ಹೆಚ್ಚು ಸಂಚಾರ ದಟ್ಟಣೆ ಇರುವ ಪ್ರದೇಶಗಳನ್ನು ಗುರುತಿಸಿ ರಸ್ತೆ ಅಗಲವಿದ್ದು ಮುಕ್ತ ಎಡ ತಿರುವು ಅಥವಾ ಬಲ ತಿರುವು ಇರುವ ಕಡೆಗಳಲ್ಲಿ ಸಂಚಾರ ಪರಿಕರಗಳನ್ನು (Street Furniture) ಅಳವಡಿಸಿ ಪಥಶಿಸ್ತನ್ನು ಜಾರಿ ಮಾಡಿದ ಕಾರಣ ನಿರೀಕ್ಷೆಗೂ ಮೀರಿ ಅಪಘಾತಗಳ ಸಂಖ್ಯೆಯು ಇಳಿಮುಖವಾಗುವುದಕ್ಕೆ ಕಾರಣವಾಗಿರುತ್ತದೆ. ಹಾಗೂ ಸಂಚಾರವೂ ಸಹ ಸುಗಮಗೊಂಡಿರುತ್ತದೆ.

4) ಬ್ಲಾಕ್‌ಬೆರ್ರಿ ಉಪಕರಣಗಳನ್ನು ಎ.ಎಸ್.ಐ, ಪಿ.ಎಸ್.ಐ ಮತ್ತು ಪಿ.ಐ ಹಂತದವರೆಗಿನ ಅಧಿಕಾರಿಗಳಿಗೆ ಹಂಚಿಕೆ ಮಾಡಲಾಗಿದ್ದು, ಇದರ ಮೂಲಕ ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುವ ವ್ಯವಸ್ಥೆ ಕಲ್ಪಿಸಲಾಗಿದೆ.

5) ಬೆಂಗಳೂರು ನಗರದಲ್ಲಿ ಪಾದಚಾರಿಗಳಿಗೆ ಅನುವಾಗುವಂತೆ 49 ಪೆಲಿಕಾನ್ ಲೈಟ್ ಸಿಗ್ನಲ್‌ಗಳನ್ನು ಅಳವಡಿಸಲಾಗಿದೆ. ಇದರಿಂದಾಗಿ ಪಾದಚಾರಿಗಳಿಗೆ ರಸ್ತೆ ದಾಟಲು ಅನುಕೂಲವಾಗಿರುತ್ತದೆ.

6) ಬೆಂಗಳೂರು ನಗರದ ಬಹುತೇಕ ಎಲ್ಲಾ ಜಂಕ್ಷನ್‌ಗಳಲ್ಲಿ ಪಾದಚಾರಿಗಳು ರಸ್ತೆ ದಾಟಲು ಅನುವಾಗುವಂತೆ ಹೊಟರ್‌ಗಳನ್ನು ಮತ್ತು ಟೈಮರ್‌ಗಳನ್ನು ಅಳವಡಿಸಲಾಗಿದೆ. ಇದರಿಂದ ಪಾದಚಾರಿಗಳು ರಸ್ತೆ ಅಪಘಾತಕ್ಕೊಳಗಾಗುವುದನ್ನು ಕಡಿಮೆಗೊಳಿಸಲಾಗಿದೆ.

7) ನಗರದಾದ್ಯಂತ ಒಟ್ಟು 30000 ಸಂಚಾರ ಸೂಚನಾ ಫಲಕಗಳನ್ನು ಅಳವಡಿಸಲಾಗಿದೆ.

8) ಬೆಂಗಳೂರು ನಗರದ 107 ಪ್ರಮುಖ ರಸ್ತೆಗಳನ್ನು ಗುರುತಿಸಿ ಝೀರೋ ಟಾಲರೆನ್ಸ್ ರಸ್ತೆ ಎಂಬುದಾಗಿ ಜಾರಿ ಮಾಡಲಾಗಿರುತ್ತದೆ. ಅಂತಹ ರಸ್ತೆಗಳಲ್ಲಿ ಯಾವುದೇ ರೀತಿಯ ಅನಧಿಕೃತ ವಾಹನ ನಿಲುಗಡೆ, ತಪ್ಪು ವಾಹನ ನಿಲುಗಡೆ ಹಾಗೂ ಫುಟ್‌ಪಾತ್ ಮೇಲೆ ವಾಹನ ನಿಲುಗಡೆಗಳಾಗದಂತೆ ಸಂಚಾರ ಅಧಿಕಾರಿಗಳ ಗಸ್ತುಗಳನ್ನು ಏರ್ಪಡಿಸಲಾಗಿರುತ್ತದೆ.

9) ಪೀಕ್ ಅವರ್ಸ್‌ಗಳಲ್ಲಿ ಬೆಂಗಳೂರು ನಗರದ ಎಲ್ಲಾ ಜಂಕ್ಷನ್ ಮತ್ತು ರಸ್ತೆಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ ತೊಡಗಿಕೊಂಡು ಸುಗಮ ವಾಹನ ಸಂಚಾರಕ್ಕೆ ಅನುವು ಮಾಡಿಕೊಡುತ್ತಾರೆ.

10) ಪ್ರತಿಯೊಂದು ಸಂಚಾರ ಪೊಲೀಸ್ ಠಾಣೆಯ ವ್ಯಾಪ್ತಿಯಲ್ಲಿ ಒಂದೊಂದು ಪ್ರಮುಖ ರಸ್ತೆಗಳನ್ನು ಗುರುತಿಸಿ ಮಾದರಿ ರಸ್ತೆಯನ್ನಾಗಿ ಅಳವಡಿಸಿಕೊಳ್ಳಲಾಗಿದೆ ಹಾಗೂ ಇಂತಹ ಮಾದರಿ ರಸ್ತೆಗಳಲ್ಲಿ ಯಾವುದೇ ರೀತಿಯ ಸಂಚಾರ ಸಮಸ್ಯೆಗಳು ಸಂಭವಿಸದಂತೆ ಹಾಗೂ ರಸ್ತೆ ಸುರಕ್ಷತೆ ಕಟ್ಟುನಿಟ್ಟಾಗಿ ಜಾರಿ ಮಾಡಲಾಗಿದೆ.

11) ಅತ್ಯಾಧುನಿಕ ತಂತ್ರಜ್ಞಾನ ಬಳಕೆ ಮಾಡಿಕೊಂಡು ಸಂಚಾರ ನಿಯಂತ್ರಣದಿಂದಾಗಿ ನಗರದ ರಸ್ತೆಗಳಲ್ಲಿ ಸಾರಿಗೆ ಸಮಯವು ಕಡಿತಗೊಂಡಿರುತ್ತದೆ (Reduction in travel time).

12) ಬೆಂಗಳೂರು ನಗರದಲ್ಲಿ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳಿಂದ ಕಳೆದ ಹಲವು ವರ್ಷಗಳಲ್ಲಿ ಹಲವಾರು ದ್ವಿಚಕ್ರ ವಾಹನ ಸವಾರರು ಅದರಲ್ಲೂ ಪ್ರಮುಖವಾಗಿ ಇರುಳಿನ ಸಮಯದಲ್ಲಿ ಸ್ವಯಂ ಅಪಘಾತಕ್ಕೀಡಾಗಿ ಪ್ರಾಣ

ಕಳೆದುಕೊಂಡಿರುತ್ತಾರೆ. ಇಂತಹ ಅಪಘಾತಗಳನ್ನು ತಡೆಯುವ ನಿಟ್ಟಿನಲ್ಲಿ ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು ಬೆಂಗಳೂರು ನಗರದಾದ್ಯಂತ ಅವೈಜ್ಞಾನಿಕ ಹಾಗೂ ಅನಧಿಕೃತವಾಗಿ ನಿರ್ಮಿಸಲಾಗಿದ್ದ ರಸ್ತೆ ಉಬ್ಬರಗಳನ್ನು ತೆರವುಗೊಳಿಸಲಾಗಿದೆ. ಪ್ರಮುಖ ರಸ್ತೆಗಳಲ್ಲಿ ವಾಹನದ ವೇಗವನ್ನು ನಿಯಂತ್ರಿಸಿ ಅಪಘಾತಗಳನ್ನು ತಡೆಯುವ ಸಲುವಾಗಿ ಹಾಗೂ ಅವಶ್ಯಕವಿರುವ ಸ್ಥಳಗಳಲ್ಲಿ ಮಾತ್ರವೇ ಐ.ಆರ್.ಸಿ ಮಾದರಿಯಲ್ಲಿ ವೈಜ್ಞಾನಿಕವಾಗಿ ರಸ್ತೆ ಉಬ್ಬರಗಳನ್ನು ನಿರ್ಮಿಸಲಾಗಿದೆ.

13) ಪ್ರತಿ ಸಂಚಾರ ಪೊಲೀಸ್ ಠಾಣಾ ಮಟ್ಟದಲ್ಲಿ ಪ್ರತಿ ತಿಂಗಳ ಮೂರನೇ ಶನಿವಾರಗಳಂದು ನಾಗರೀಕ ಸಂಚಾರ ವೇದಿಕೆ ಕಾರ್ಯಕ್ರಮಗಳನ್ನು ನಡೆಸಲಾಗುತ್ತಿದ್ದು, ಆಯಾ ಸಂಚಾರ ಠಾಣಾ ವ್ಯಾಪ್ತಿಯ ನಾಗರೀಕರು ತಮ್ಮ ಸಂಚಾರ ಸಮಸ್ಯೆಗಳನ್ನು ಠಾಣಾ ಮಟ್ಟದಲ್ಲಿ ಪರಿಹರಿಸಿಕೊಳ್ಳುವ ವೇದಿಕೆಯನ್ನು ಸೃಜಿಸಲಾಗಿದೆ.

14) ಬೆಂಗಳೂರು ನಗರದಲ್ಲಿ ಸಂಚಾರ ಸಮಸ್ಯೆಗಳನ್ನು ಪರಿಹರಿಸಲು ಹಾಗೂ ಸುಗಮ ಸಂಚಾರಕ್ಕೆ ಅನುವು ಮಾಡಲು ಮತ್ತು ರಸ್ತೆಯಲ್ಲಿ ಸುರಕ್ಷತೆಯನ್ನು ಜಾರಿ ಮಾಡಲು ಹಲವಾರು ಕ್ರಮಗಳನ್ನು, ಆಂದೋಲನಗಳನ್ನು ಹಾಗೂ ವೃತ್ತಿಪರ ಚಾಲಕರುಗಳಿಗೆ ಹಲವಾರು ತರಬೇತಿ ಹಾಗೂ ರಸ್ತೆ ಸುರಕ್ಷತೆಯ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ನಡೆಸುತ್ತಿದ್ದು ರಸ್ತೆ ಸುರಕ್ಷತೆಯನ್ನು ಅತ್ಯುತ್ತಮ ರೀತಿಯಲ್ಲಿ ಜಾರಿ ಮಾಡಲಾಗಿದೆ.

15) ಸಂಚಾರ ನಿಯಮಗಳನ್ನು ಉಲ್ಲಂಘಿಸುವ ಚಾಲಕರುಗಳ ವಿರುದ್ಧ ಸ್ಥಳದಲ್ಲೇ ಸಂಚಾರ ಪೊಲೀಸ್ ಅಧಿಕಾರಿಗಳು ಪ್ರಕರಣಗಳನ್ನು ದಾಖಲಿಸಿ ಸ್ಥಳದಂಡವನ್ನು ಪಾವತಿಸಿಕೊಳ್ಳುತ್ತಾರೆ. ಪೀಕ್ ಅವರ್ಸ್‌ಗಳಲ್ಲಿ ಸಂಚಾರ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಯವರುಗಳು ಸಂಚಾರ ನಿರ್ವಹಣೆಯಲ್ಲಿ

ತೊಡಗಿಕೊಂಡಿರುವ ಕಾರಣ ಪ್ರಕರಣಗಳನ್ನು ದಾಖಲಿಸಲು ಸಾಧ್ಯವಿರುವುದಿಲ್ಲ ಅಂತಹ ಸಂದರ್ಭದಲ್ಲಿ ಕಣ್ಗಾವಲು, ಎನ್‌ಫೋರ್ಸ್‌ಮೆಂಟ್ ಹಾಗೂ ಡಿಜಿಟಲ್ ಕ್ಯಾಮರಾಗಳ ಮೂಲಕ ಅವರುಗಳ ವಾಹನಗಳ ಛಾಯಾಚಿತ್ರವನ್ನು ಸೆರೆಹಿಡಿದು ಅವರುಗಳ ವಿರುದ್ಧ ಐ.ಎಂ.ವಿ 133 ನೋಟೀಸ್‌ಗಳನ್ನು ಕಳುಹಿಸಿ ದಂಡ ಪಾವತಿಸಿಕೊಳ್ಳಲಾಗುತ್ತಿದೆ.

16) ನಗರದ ರಸ್ತೆಗಳಲ್ಲಿ ಸಂಚಾರ ಸಮಸ್ಯೆಗಳಿಗೆ ಪ್ರಮುಖ ಕಾರಣವಾಗಿರುವ ವಾಹನಗಳ ಅನಧಿಕೃತ, ತಪ್ಪು ನಿಲುಗಡೆ ಹಾಗೂ ಫುಟ್‌ಪಾತ್‌ಮೇಲೆ ವಾಹನ ನಿಲುಗಡೆಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗಿದೆ. 2013ನೇ ಸಾಲಿನಲ್ಲಿ ನಗರಾದ್ಯಂತ ಒಟ್ಟಾರೆ 20,56,313 ಹಾಗೂ 2014ನೇ ಸಾಲಿನಲ್ಲಿ ಒಟ್ಟು 19,43,059 ತಪ್ಪು ನಿಲುಗಡೆ, ಅನಧಿಕೃತ ಹಾಗೂ ಫುಟ್‌ಪಾತ್ ನಿಲುಗಡೆ ಪ್ರಕರಣಗಳನ್ನು ದಾಖಲಿಸಿಕೊಳ್ಳಲಾಗಿದೆ.

17) ಬೆಂಗಳೂರು ನಗರದಾದ್ಯಂತ ಸಮಾನ ವೇಗಮಿತಿಯನ್ನು ಜಾರಿಗೊಳಿಸಲಾಗಿದ್ದು ಅತಿ ವೇಗವಾಗಿ ಚಲಿಸುವವರ ವಿರುದ್ಧವೂ ಸಹ ಕಟ್ಟು ನಿಟ್ಟಿನ ಕ್ರಮಗಳನ್ನು ಜರುಗಿಸಲಾಗಿದೆ. 2013ನೇ ಸಾಲಿನಲ್ಲಿ ಅತಿವೇಗವಾಗಿ ಚಾಲನೆ ಮಾಡಿರುವ ವಾಹನಗಳ ವಿರುದ್ಧ ಒಟ್ಟು 1,00,432 ಪ್ರಕರಣಗಳನ್ನು ದಾಖಲಿಸಿದ್ದು, 2014ನೇ ಸಾಲಿನಲ್ಲಿ ಒಟ್ಟು 1,18,264 ಪ್ರಕರಣಗಳನ್ನು ದಾಖಲಿಸಿ ದಂಡವನ್ನು ವಸೂಲಿ ಮಾಡಲಾಗಿದೆ.

18) ಅತಿ ವೇಗವಾಗಿ ಚಲಿಸುವ ವಾಹನಗಳ ವಿರುದ್ಧ ಕ್ರಮ ಕೈಗೊಳ್ಳಲು ಬೆಂಗಳೂರು ನಗರ ಸಂಚಾರ ಪೊಲೀಸ್ ವಿಭಾಗವು 13 ಇಂಟರ್‌ಸೆಪ್ಟರ್ ವಾಹನಗಳನ್ನು ಉಪಯೋಗಿಸಿಕೊಳ್ಳುತ್ತಿರುವುದರ ಜೊತೆಗೆ 5 ಎನ್‌ಫೋರ್ಸ್‌ಮೆಂಟ್ ಕ್ಯಾಮರಾಗಳ

ಸಹಾಯದಿಂದಲೂ ಸಹ ಅತಿವೇಗ ಚಾಲನೆ ಮಾಡುವ ವಾಹನಗಳ ವಿರುದ್ಧ ಪ್ರಕರಣಗಳನ್ನು ದಾಖಲಿಸಲಾಗಿದೆ.

19) ಥರ್ಮೋಪ್ಲಾಸ್ಟಿಕ್ ರೋಡ್ ಮಾರ್ಕಿಂಗ್ ಅನ್ನು ಮಾಡಿಸುವ ಮೂಲಕ ಸಂಚಾರದಲ್ಲಿ ಶಿಸ್ತು ಮೂಡಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ. ಅಲ್ಲದೆ ಟ್ಯೂಬ್ಯುಲರ್ ಕೋನ್, ಮೀಡಿಯನ್ ಮಾರ್ಕರ್, ಹಜಾರ್ಡ್ ಬೋರ್ಡ್ ಇತ್ಯಾದಿ ರಸ್ತೆ ಸೌಲಭ್ಯಗಳನ್ನು ಅಳವಡಿಸಲಾಗಿದೆ.

20) ಇದೇ ರೀತಿ ಅಡ್ಡಾ ದಿಡ್ಡಿಯಾಗಿ ಚಾಲನೆ ಮಾಡುವವರ ವಿರುದ್ಧ ಅಪಾಯಕಾರಿ ಚಾಲನೆ (Dangerous Driving) ಪ್ರಕರಣಗಳನ್ನು ದಾಖಲಿಸುತ್ತಿದೆ. 2013ನೇ ಸಾಲಿನಲ್ಲಿ ಒಟ್ಟು 68,365 ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ 2014ನೇ ಸಾಲಿನಲ್ಲಿ ಒಟ್ಟು 1,01,072 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

ಬೆಂಗಳೂರು ನಗರದ ಪ್ರತಿಯೊಂದು ಸಿಗ್ನಲ್‌ಗಳಲ್ಲಿ ವಾಹನ ಚಾಲಕರು ನಿಯಮಗಳನ್ನು ಗಾಳಿಗೆ ತೂರಿ ಅಪಾಯಕಾರಿ ರೀತಿಯಲ್ಲಿ ವಾಹನ ಚಾಲನೆ ಮಾಡುವ ಚಾಲಕರ ವಿರುದ್ಧ ಹಲವಾರು ರೀತಿ ಪ್ರಕರಣಗಳನ್ನು ದಾಖಲಿಸಲಾಗಿದೆ.

- ಸಂಚಾರ ಕಣ್ಗಾವಲು ಕ್ಯಾಮರಾಗಳ ಮೂಲಕ
- ಎನ್‌ಫೋರ್ಸ್‌ಮೆಂಟ್ ಕ್ಯಾಮರಾಗಳ ಮೂಲಕ
- ಸಂಚಾರ ಪೊಲೀಸರು ಹೊಂದಿರುವ ಡಿಜಿಟಲ್ ಕ್ಯಾಮರಾಗಳ ಮೂಲಕ
- ಸಂಚಾರ ಪೊಲೀಸ್ ಅಧಿಕಾರಿಗಳು ಸ್ಥಳದಲ್ಲೇ ನಿಲ್ಲಿಸಿ ಅವರುಗಳಿಂದ ಸ್ಥಳದಂಡವನ್ನು ಪಾವತಿಸಿಕೊಳ್ಳುವ ಮೂಲಕ ಇಂತಹ ಅಪಾಯಕಾರಿ ಚಾಲನೆ ಮಾಡುವ ಚಾಲಕರುಗಳ ವಿರುದ್ಧ ಐ.ಎಂ.ವಿ ಕಾಯ್ದೆ ಕಲಂ. 20

ಹಾಗೂ 184 ರ ಜೊತೆಗೆ ನಿಯಮ 21 ರೀತ್ಯ ಅಂದರೆ ಮೊದಲನೇ ಅಪರಾಧಕ್ಕೇ ಅವರುಗಳ ಚಾಲನಾ ಪರವಾನಗಿ ಪತ್ರಗಳನ್ನು ಅಮಾನತ್ತುಪಡಿಸಲು ಕ್ರಮ ಕೈಗೊಳ್ಳುವುದರ ಜೊತೆಗೆ ಅವರನ್ನು ನ್ಯಾಯಾಲಯಕ್ಕೆ ಹಾಜರುಪಡಿಸಲಾಗುತ್ತಿದೆ.

21) ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರನ್ನು ಪತ್ತೆ ಮಾಡಲು ಅತ್ಯಾಧುನಿಕ ಅಲ್ಕೋಮೀಟರ್‌ಗಳನ್ನು ಖರೀದಿಸಲಾಗಿದ್ದು ಅವುಗಳ ಮೂಲಕ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿರುವವರನ್ನು ಪತ್ತೆ ಮಾಡಲಾಗುತ್ತಿದೆ. ಬೆಂಗಳೂರು ನಗರದ ಸಂಚಾರ ಪೊಲೀಸ್ ವಿಭಾಗವು ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುವವರ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಂಡಿರುತ್ತದೆ. ಬೆಂಗಳೂರು ನಗರದ ರಸ್ತೆಗಳಲ್ಲಿ 2013ನೇ ಸಾಲಿನಲ್ಲಿ ಮದ್ಯಪಾನ ಮಾಡಿ ವಾಹನ ಚಾಲನೆ ಮಾಡುತ್ತಿದ್ದ ಚಾಲಕರ ವಿರುದ್ಧ ಒಟ್ಟು 61,709 ಪ್ರಕರಣಗಳನ್ನು ಹಾಗೂ 2014ನೇ ಸಾಲಿನಲ್ಲಿ ಒಟ್ಟು 55,138 ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

22) ಬೆಂಗಳೂರು ನಗರ ರಸ್ತೆಗಳಲ್ಲಿ ಪಥ ಶಿಸ್ತು ನಿಯಮಗಳನ್ನು ಉಲ್ಲಂಘಿಸುವ ವಾಹನ ಚಾಲಕರುಗಳಿಗೆ ಕಠಿಣ ನಿಯಮಗಳ ಜಾರಿಯು ಕ್ರಮಗಳನ್ನು ಕೈಗೊಳ್ಳಲಾಗಿರುತ್ತದೆ. 2013ನೇ ಸಾಲಿನಲ್ಲಿ ಒಟ್ಟು 2,78,473 ಪಥ ಶಿಸ್ತು ನಿಯಮ ಉಲ್ಲಂಘನೆ ಪ್ರಕರಣಗಳನ್ನು ದಾಖಲಿಸಲಾಗಿದೆ ಹಾಗೂ 2014ನೇ ಸಾಲಿನಲ್ಲಿ ಒಟ್ಟು 5,29,201 ಪ್ರಕರಣಗಳನ್ನು ದಾಖಲಿಸಲಾಗಿದೆ.

23) ಡ್ರಾಗ್ ರೇಸಿಂಗ್ ಮತ್ತು ವೀಲಿಂಗ್ ಮತ್ತು ಅಡ್ಡಾದಿಡ್ಡಿ ವಾಹನ ಚಾಲನೆ ಮಾಡುವುದನ್ನು ತಡೆಯಲು ಶಾಲಾ ಕಾಲೇಜು, ವಾಣಿಜ್ಯ

ಮಳಿಗೆ ಹಾಗೂ ಪ್ರಮುಖ ಸ್ಥಳಗಳಲ್ಲಿ ಕೋಬ್ರಾ ಹಾಗೂ ಸಂಚಾರ ಪೊಲೀಸರ ಗಸ್ತುಗಳನ್ನು ಏರ್ಪಡಿಸಲಾಗಿದೆ.

24) 2013ನೇ ಸಾಲಿನಲ್ಲಿ ಒಟ್ಟು 5,575 ಹಾಗೂ 2014ನೇ ಸಾಲಿನಲ್ಲಿ ಒಟ್ಟು 16194 ವಾಹನ ಚಾಲಕರುಗಳ ಚಾಲನಾ ಪರವಾನಗಿ ಪತ್ರಗಳನ್ನು ಅಮಾನತ್ತುಪಡಿಸುವಂತೆ ಈಗಾಗಲೇ ಪ್ರಾದೇಶಿಕ ಸಾರಿಗೆ ಅಧಿಕಾರಿಗಳಿಗೆ ಕಳುಹಿಸಿಕೊಡಲಾಗಿದೆ.

25) ಬೆಂಗಳೂರು ನಗರದಲ್ಲಿ ಕಳೆದ ಮೂರು ವರ್ಷಗಳಲ್ಲಿ ಸಂಭವಿಸಿದ ಅಪಘಾತ ಪ್ರಕರಣಗಳು ಈ ಕೆಳಕಂಡಂತೆ ಇರುತ್ತದೆ.

ವರ್ಷ	ಒಟ್ಟು ಅಪಘಾತಗಳು
2012	5502
2013	5230
2014	5004

ಮೇಲ್ಕಂಡ ಮೂರು ವರ್ಷಗಳ ಅಪಘಾತಗಳ ಅಂಕಿ ಅಂಶಗಳನ್ನು ಗಮನಿಸಿದಾಗ 2014ನೇ ಸಾಲಿನಲ್ಲಿ ಅಪಘಾತ ಪ್ರಕರಣಗಳು ಇಳಿಮುಖವಾಗಿರುವುದು ಅಂಕಿ ಅಂಶಗಳಿಂದ ಕಂಡು ಬಂದಿರುತ್ತದೆ.

26) ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಜಾರಿ ಮಾಡಲಾಗುತ್ತಿದ್ದು ಪ್ರತಿ ವರ್ಷ ದಾಖಲು ಮಾಡುತ್ತಿರುವ ಪ್ರಕರಣಗಳ ಸಂಖ್ಯೆ ಹಾಗೂ ದಂಡದ ಮೊತ್ತವೂ ಸಹ ಹೆಚ್ಚುತ್ತಿದೆ. ಬೆಂಗಳೂರು ನಗರದಲ್ಲಿ ಸಂಚಾರ ನಿಯಮ ಉಲ್ಲಂಘನೆ ಮಾಡುವ ವಾಹನ ಚಾಲಕರ ವಿರುದ್ಧ ಪ್ರಕರಣಗಳನ್ನು ದಾಖಲಿಸಿ ದಂಡ ವಸೂಲಾತಿ ಮಾಡಲಾಗಿರುತ್ತದೆ. ಕಳೆದ ಮೂರು ವರ್ಷಗಳ ಅಂಕಿ ಅಂಶಗಳು ಈ ಕೆಳಕಂಡಂತೆ ಇರುತ್ತದೆ.

ವರ್ಷ	ದಾಖಲಾದ ಪ್ರಕರಣಗಳು	ವಸೂಲಾದ ದಂಡದ ಮೊತ್ತ
2012	52,04,800	53,85,17,929
2013	54,33,516	56,98,09,260
2014	74,36,336	65,92,21,449

ಆ)

1) ಸಂಚಾರ ದಟ್ಟಣೆಗಳನ್ನು ಸುಗಮಗೊಳಿಸುವ ಸಲುವಾಗಿ ಹಾಗೂ ಸಂಚಾರ ನಿಯಮಗಳನ್ನು ಉಲ್ಲಂಘಿಸುವವರ ವಿರುದ್ಧ ಕ್ರಮ ಕೈಗೊಳ್ಳಲು ಅನುವಾಗುವಂತೆ ನಗರದ ಪ್ರಮುಖ ಸ್ಥಳಗಳಲ್ಲಿ ಒಟ್ಟು 179 ಸಂಚಾರ ಕಣ್ಗಾವಲು ಕ್ಯಾಮರಾಗಳನ್ನು ಅಳವಡಿಸಲಾಗಿರುತ್ತದೆ ಮತ್ತು ಹೊಸದಾಗಿ 100 ಕ್ಯಾಮೆರಾಗಳ ಅಳವಡಿಕೆ ಕಾರ್ಯ ಪ್ರಗತಿಯಲ್ಲಿರುತ್ತದೆ.

2) ಪೊಲೀಸ್ ವ್ಯವಸ್ಥೆಯ ಹೆಚ್ಚಳದ ಕುರಿತು ಈಗಾಗಲೇ ಪೊಲೀಸ್ ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.

3) ಸಂಚಾರ ನಿಯಂತ್ರಣ/ನಿಯಮಗಳ ಉಲ್ಲಂಘನೆಗೆ ಬೆಂಗಳೂರು ನಗರ ಸಂಚಾರ ವಿಭಾಗವು ತೆಗೆದುಕೊಂಡಿರುವ ಕಟ್ಟುನಿಟ್ಟಿನ ಕ್ರಮಗಳು ಈ ಕೆಳಕಂಡಂತೆ ಇರುತ್ತದೆ.

   1) ಸಂಚಾರ ನಿರ್ವಹಣಾ ಕೇಂದ್ರವು (ಟಿಎಂಸಿ) ಆಧುನಿಕ ತಂತ್ರಜ್ಞಾನವನ್ನು ಬಳಸಿಕೊಂಡು ಬೆಂಗಳೂರು ನಗರದಾದ್ಯಂತ ಅಳವಡಿಸಲಾಗಿರುವ 179 ಕಣ್ಗಾವಲು ಕ್ಯಾಮರಾದ ಮೂಲಕ ಟಿಎಂಸಿಯಲ್ಲಿ ಅಳವಡಿಸಲಾಗಿರುವ ಮಿಡಿಯೋವಾಲ್‌ನ ಮುಖಾಂತರ ಸಂಚಾರ ದಟ್ಟಣೆಯನ್ನು ನಿವಾರಸುವ ನಿಟ್ಟಿನಲ್ಲಿ ತೆಗೆದುಕೊಂಡ ಮೊದಲ ಹೆಜ್ಜೆ. 19 ಕಾರಿಡಾರ್‌ಗಳಲ್ಲಿ ಎರಡು ಪಾಳಿಯಲ್ಲಿ ನಿತ್ಯ ಕ್ಯಾಮರಾ ವಿಕ್ಷೀಸಿ ಜಂಕ್ಷನ್‌ಗಳಲ್ಲಿನ

ಸಂಚಾರದ ದಟ್ಟಣೆಯನ್ನು ಪರಿಶೀಲಿಸಿ, ಸಿಗ್ನಲ್ ಲೈಟ್‌ನ ಸಮಯವನ್ನು ಟಿಎಂಸಿಯಿಂದಲೇ ಬದಲಾವಣೆ ಮಾಡುವ ಮೂಲಕ ಸಂಚಾರದ ಒತ್ತಡವನ್ನು ಕಡಿಮೆ ಮಾಡಿ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸಲು ಕ್ರಮ ಕೈಗೊಳ್ಳಲಾಗಿರುತ್ತದೆ.

2) ಕಣ್ಣಿಗೆ ಕಾಣುವಂತಹ (Visible Violation) ಸಂಚಾರ ಉಲ್ಲಂಘನೆಯನ್ನು (ಉದಾ: ಪಾದಾಚಾರಿ ಮಾರ್ಗದ ಮೇಲೆ ವಾಹನ ನಿಲುಗಡೆ, ಹೆಲ್ಮೆಟ್ ಇಲ್ಲದೇ ವಾಹನ ಚಾಲನೆ, ಸೀಟ್ ಬೆಲ್ಟ್, ನೋ ಪಾರ್ಕಿಂಗ್ ಇತ್ಯಾದಿ) ಕ್ಯಾಮರಾದ ಮುಖಾಂತರ ಸೆರೆ ಹಿಡಿದು ವಾಹನ ಮಾಲೀಕರಿಗೆ ನೋಟೀಸ್ ಜಾರಿ ಮಾಡಲಾಗುವುದು.

3) ಬೆಂಗಳೂರು ನಗರ ಸಂಚಾರ ನಿಸ್ತಂತು ಸೇವೆ ಟಿಎಂಸಿಯಲ್ಲಿಯೇ ಇದ್ದು ಎಲ್ಲಾ ಸಂಚಾರ ಚಾನೆಲ್‌ನವರು ವಿಡಿಯೋವಾಲ್ ಮುಖಾಂತರ ಅವರಿಗೆ ಸಂಬಂಧಪಟ್ಟ ಜಂಕ್ಷನ್‌ಗಳ ಕ್ಯಾಮರಾವನ್ನು ವಿಕ್ಷೀಸಿ ಸ್ಥಳೀಯ ಅಧಿಕಾರಿಗಳಿಗೆ ಮತ್ತು ಜಂಕ್ಷನ್ ಪೊಲೀಸ್‌ರವರಿಗೆ ಸೂಕ್ತ ಸಮಯದಲ್ಲಿ ಮಾಹಿತಿ ಮತ್ತು ತೆಗೆದುಕೊಳ್ಳಬೇಕಾದಂತಹ ನಿರ್ಣಯವನ್ನು ಹಿರಿಯ ಅಧಿಕಾರಿಗಳು ನೀಡಿದ ಆದೇಶವನ್ನು ವಿನಿಮಯ ಮಾಡುತ್ತಿರುತ್ತಾರೆ.

4) ಬೆಂಗಳೂರು ನಗರದಾದ್ಯಂತ ಇರುವ ಸೂಚನಾ ಫಲಕದ (ವಿ.ಎಂ.ಎಸ್) ಮುಖಾಂತರ ಸಮಯ ಸಮಯಕ್ಕೆ ನಗರದಲ್ಲಾಗುವ ಸಂಚಾರ ವ್ಯತ್ಯಯ, ಮಾರ್ಗ ಬದಲಾವಣೆ ಹಾಗೂ ಇನ್ನಿತರೆ ಸೂಚನೆಗಳನ್ನು ಟಿಎಂಸಿಯಿಂದಲೇ ಜನರಿಗೆ ತಿಳಿಯುವಂತೆ ಬಿತ್ತರಿಸಲಾಗುತ್ತದೆ.

5) ಸಂಚಾರ ವ್ಯತಯ, ಮಾರ್ಗ ಬದಲಾವಣೆ ಹಾಗೂ ಇನ್ನಿತರೆ ಸೂಚನೆಗಳನ್ನು ಪಡೆಯಲು ಮತ್ತು ಕಳುಹಿಸಲು ಉಚಿತ

ಎಸ್.ಎಂ.ಎಸ್ ವ್ಯವಸ್ಥೆ ಇರುತ್ತದೆ, ಇದಲ್ಲದೇ ಸಮಾಜಿಕ ತಾಣಗಳಾದ ಫೇಸ್‌ಬುಕ್ ಮತ್ತು ಟ್ವಿಟರ್ ಮುಖಾಂತರ ಸಾರ್ವಜನಿಕರಿಗೆ ಸಮಯ ಸಮಯಕ್ಕೆ ಸಂಚಾರದ ಮಾಹಿತಿಯನ್ನು ಟಿಎಂಸಿಯಿಂದಲ್ಲೇ ರವಾನಿಸಲಾಗುತ್ತದೆ.

6) ಬೆಂಗಳೂರು ನಗರ ಸಂಚಾರ ವಿಭಾಗದ ಪೊಲೀಸ್ ವೆಬ್‌ಸೈಟ್ ಅನ್ನು ಪ್ರತಿನಿತ್ಯ ಸಮಗ್ರ ಮಾಹಿತಿಗಳೊಂದಿಗೆ ಇಲ್ಲಿಯೇ ಅಫ್ ಡೇಟ್ ಮಾಡಲಾಗುತ್ತಿರುತ್ತದೆ. ಹಾಗೂ ನಗರದಲ್ಲಿ ಅಳವಡಿಸಲಾಗಿರುವ ಸಿಗ್ನಲ್ ಲೈಟ್, ವಿ.ಎಂ.ಎಸ್, ಸರ್ವಿಲನ್ಸ್ ಕ್ಯಾಮರಾ ಇನ್ನಿತರೆ ತಾಂತ್ರಿಕ ಉಪಕರಣಗಳ ನಿಯಂತ್ರಣವನ್ನು ಮಾಡಬಹುದಲ್ಲದೆ, ಸಂದರ್ಭಕ್ಕೆ ತಕ್ಕಂತೆ ಮಾರ್ಪಾಡುಗಳನ್ನು ಮಾಡುವ ತಂತ್ರಜ್ಞಾನವನ್ನು ಒಳಗೊಂಡಿರುತ್ತದೆ.

4) ಖಾಸಗಿ ಬಸ್‌ಗಳಿಗೆ ನಗರ ಪ್ರದೇಶದಲ್ಲಿ ನಿರ್ಬಂಧ ವಿಧಿಸುವ ಸಂಬಂಧ ಸಂಚಾರ ವಿಭಾಗದಿಂದ ಉಪ ಪೊಲೀಸ್ ಕಮೀಷನರ್, ಸಂಚಾರ ಪಶ್ಚಿಮ ವಿಭಾಗ, ರವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸಮಿತಿಯನ್ನು ರಚಿಸಲಾಗಿದೆ.

1) ಉಪ ಪೊಲೀಸ್ ಕಮೀಷನರ್, ಸಂಚಾರ ಪೂರ್ವ ವಿಭಾಗ

2) ಸಹಾಯಕ ಪೊಲೀಸ್ ಕಮೀಷನರ್, ಸಂಚಾರ ಪಶ್ಚಿಮ ಉಪ ವಿಭಾಗ

3) ಸಹಾಯಕ ಪೊಲೀಸ್ ಕಮೀಷನರ್, ಸಂಚಾರ ಯೋಜನೆ

4) ಶ್ರೀ ಬಿ.ಹೆಚ್. ಸಂಜೀವ್ ಕುಮಾರ್, ಟಿಟಿಐಸಿ, ಬೆಂಗಳೂರು.

ಈ ಸಮಿತಿಯು ಸಾರಿಗೆ, ಬಿಬಿಎಂಪಿ ಮತ್ತು ಬಿಡಿಎ ಅಧಿಕಾರಿಗಳೊಂದಿಗೆ ಜಂಟಿಯಾಗಿ ಸಮೀಕ್ಷೆ ನಡೆಸಿ ಬೆಂಗಳೂರು ನಗರದ ಕೇಂದ್ರ ಭಾಗದಲ್ಲಿ ಸಂಚಾರ ದಟ್ಟಣೆ, ಶಬ್ದ ಮತ್ತು ವಾಯು

ಮಾಲಿನ್ಯವನ್ನು ಪರಿಣಾಮಕಾರಿಯಾಗಿ ನಿಯಂತ್ರಿಸಲು ಹೊರ ರಾಜ್ಯ ಮತ್ತು ರಾಜ್ಯದ ವಿವಿಧ ಪ್ರದೇಶಗಳಿಂದ ಬೆಂಗಳೂರು ಮಹಾನಗರಕ್ಕೆ ಬರುವ ಮತ್ತು ಬೆಂಗಳೂರು ಮಹಾನಗರದಿಂದ ರಾಜ್ಯದ ವಿವಿಧ ಸ್ಥಳಗಳಿಗೆ ಹಾಗೂ ಹೊರ ರಾಜ್ಯಗಳಿಗೆ ಸಾರಿಗೆ ಸೇವೆ ಒದಗಿಸುವ ಖಾಸಗಿ ಒಪ್ಪಂದ ವಾಹನಗಳು, ಮಜಲು ವಾಹನಗಳು ಮತ್ತು ಪ್ರವಾಸಿ ವಾಹನಗಳನ್ನು ಬೆಂಗಳೂರು ಮಹಾನಗರದ ಹೊರ ವರ್ತುಲ ರಸ್ತೆಗಳವರೆಗೆ ಮಾತ್ರ ಸೀಮಿತಗೊಳಿಸಿ, ಬೆಂಗಳೂರು ಮಹಾನಗರ ಹೃದಯ ಭಾಗವನ್ನು ಪ್ರವೇಶಿಸದಂತೆ ನಿರ್ಬಂಧಿಸುವ ಬಗ್ಗೆ ಬೆಂಗಳೂರು ನಗರವಲ್ಲದೆ ರಾಷ್ಟ್ರದ ಇತರೆ ಪ್ರಮುಖ ನಗರಗಳಲ್ಲಿ ಇರುವ ವ್ಯವಸ್ಥೆಯನ್ನು ಕೂಲಂಕಷವಾಗಿ ಪರಿಶೀಲಿಸಿ ವರದಿಯನ್ನು ಸಲ್ಲಿಸಲು ತಿಳಿಸಿದ್ದು, ವರದಿಯನ್ನು ಸಲ್ಲಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು.

ಇ) ಬೆಂಗಳೂರು ನಗರದ ರಸ್ತೆಗಳಲ್ಲಿ ಭಾರೀ ಸರಕು ಸಾಗಣೆ ವಾಹನಗಳಿಂದ ಸಂಚಾರ ಸಮಸ್ಯೆಗಳು ಕಂಡುಬಂದಿದ್ದ ಕಾರಣ ಬೆಂಗಳೂರು ನಗರದ ಪೊಲೀಸ್ ಆಯುಕ್ತರು ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳು ಬೆಳಿಗ್ಗೆ 11–00 ಗಂಟೆಯಿಂದ ಸಂಜೆ 04–00 ಗಂಟೆಯವರೆಗೆ ಹಾಗೂ ರಾತ್ರಿ 10–00 ಗಂಟೆಯಿಂದ ಬೆಳಿಗ್ಗೆ 07–00ಗಂಟೆಯವರೆಗೆ ಸಂಚರಿಸುವಂತೆ ಹಾಗೂ ಬೆಳಿಗ್ಗೆ 07–00 ಗಂಟೆಯಿಂದ 11–00 ಗಂಟೆಯವರೆಗೆ ಹಾಗೂ ಸಂಜೆ 04–00 ಗಂಟೆಯಿಂದ ರಾತ್ರಿ 10–00 ಗಂಟೆಯವರೆಗೆ ಪೊಲೀಸ್ ಆಯುಕ್ತರು ಸರಹದ್ದಿಗೆ ಒಳಪಡುವ ಎಲ್ಲಾ ರಸ್ತೆಗಳಲ್ಲಿಯೂ ಸರಕು ಸಾಗಣೆ ವಾಹನಗಳ ಪ್ರವೇಶವನ್ನು ನಿರ್ಬಂಧಿಸಲಾಗಿದೆ. ಈ ಬಗ್ಗೆ ಅಧಿಸೂಚನೆ ಹೊರಡಿಸಿ ಕ್ರಮ ಕೈಗೊಳ್ಳಲಾಗಿರುತ್ತದೆ.